# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 411 |
| ಮಾನ್ಯ ಸದಸ್ಯರ ಹೆಸರು | ಶ್ರೀ ಯು. ಬಿ. ವೆಂಕಟೇಶ್<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 10.07.2023 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸಾರ್ವಜನಿಕ ಆರೋಗ್ಯ ಸೇವೆಗೆ ವೈದ್ಯರ ಕೊರತೆ ಪ್ರಮುಖ ತೊಡಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ತಾಲ್ಲೂಕು ಮತ್ತು ಜಿಲ್ಲೆ ಸೇರಿದಂತೆ ಖಾಯಂ ಮತ್ತು ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ವೈದ್ಯರುಗಳ ಸಂಖ್ಯೆ ಎಷ್ಟು; | ಕಳೆದ 3 ವರ್ಷಗಳಲ್ಲಿ ಇಲಾಖೆಯಲ್ಲಿ ಖಾಲಿಯಿರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ/ತಜ್ಞ ವೈದ್ಯರ/ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಸಮಿತಿ ಮೂಲಕ ಈ ಕೆಳಕಂಡಂತೆ ಭರ್ತಿ ಮಾಡಲಾಗಿದೆ.<br><br>ಹುದ್ದೆಯ ಹೆಸರು / ನೇಮಕ ಮಾಡಲಾದ ವೈದ್ಯರ ಸಂಖ್ಯೆ / ಹುದ್ದೆಗೆ ಹಾಜರಾದ ವೈದ್ಯರ ಸಂಖ್ಯೆ<br>ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ / 1048 / 948<br>ತಜ್ಞ ವೈದ್ಯರು / 743 / 406<br>ದಂತ ಆರೋಗ್ಯಾಧಿಕಾರಿಗಳು / 88 / 84<br><br>ಪತ್ರ ಸಂಖ್ಯೆ:ಆಕುಕ 453 ಹೆಚ್‌ಎಸ್‌ಹೆಚ್ 2022, ದಿನಾಂಕ:13.12.2022ರಲ್ಲಿ ರಾಜ್ಯದ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಯನ್ನು ಹೊರತುಪಡಿಸಿ, ಇತರೆ ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರದೇಶಗಳ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯಾಮಾನುಸಾರ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>ಇದರನ್ವಯ ಪ್ರಸ್ತುತ ಗುತ್ತಿಗೆ ಆಧಾರದ ಮೇಲೆ ನೇಮಕ ಕೊಂಡಿರುವ ವೈದ್ಯರ ವಿವರ ಈ ಕೆಳಕಂಡಂತಿದೆ. |

| ಕ್ರ. ಸಂ | ಹುದ್ದೆಯ ಹೆಸರು | ಗುತ್ತಿಗೆ ಸೇವೆಯಲ್ಲಿಕಾರ್ಯ ನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ |
|---|---|---|
| 1 | ತಜ್ಞ ವೈದ್ಯರು | 18 |
| 2 | ದಂತ ಆರೋಗ್ಯಾಧಿಕಾರಿಗಳು | 3 |
| 3 | ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು | 181 |
| | ಒಟ್ಟು | **202** |

ಇ

ವೈದ್ಯರ ಕೊರತೆಯನ್ನು ನೀಗಿಸುವಲ್ಲಿ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು?

ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮದ ವಿವರ:-

1. ಪತ್ರ ಸಂಖ್ಯೆ:ಆಕುಕ 453 ಹೆಚ್‌ಎಸ್‌ಹೆಚ್ 2022, ದಿನಾಂಕ:13.12.2022ರಲ್ಲಿ ರಾಜ್ಯದ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಯನ್ನು ಹೊರತುಪಡಿಸಿ, ಇತರ ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರದೇಶಗಳ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಹಂತದಲ್ಲಿನಿಯಾಮಾನುಸಾರ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.
2. ಇಲಾಖೆಯಲ್ಲಿ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಬರುವ ಸೇವಾನಿರತ ವೈದ್ಯರುಗಳನ್ನು ಖಾಲಿಯಿರುವ ಜಿಲ್ಲಾ ಆಸ್ಪತ್ರೆ/ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ನೇಮಿಸಲು ಕ್ರಮಕೈಗೊಳ್ಳಲಾಗುತ್ತಿದೆ.
3. ಸ್ನಾತಕೋತ್ತರ ವ್ಯಾಸಂಗವನ್ನು ಪೂರೈಸಿ 1 ವರ್ಷದ ಕಡ್ಡಾಯ ಸೇವೆಗಾಗಿ ಬರುವ ವೈದ್ಯ ಅಭ್ಯರ್ಥಿ/ತಜ್ಞವೈದ್ಯ ಅಭ್ಯರ್ಥಿಗಳನ್ನು ನೇಮಕ ಮಾಡುವ ಮೂಲಕ ವೈದ್ಯರ/ತಜ್ಞರುಗಳ ಕೊರತೆಯನ್ನು ನೀಗಿಸಲು ಕ್ರಮಕೈಗೊಳ್ಳಲಾಗುತ್ತಿದೆ.
4. 2022-23 ನೇ ಸಾಲಿಗೆ ಇಲಾಖೆಯಲ್ಲಿ ಒಂದು ವರ್ಷದ ಕಡ್ಡಾಯ ಗ್ರಾಮೀಣ/ಸರ್ಕಾರಿ ಸೇವೆಯಡಿಯಲ್ಲಿ ವೈದ್ಯರುಗಳನ್ನು ನಿಯೋಜಿಸಿರುವ ವಿವರ ಈ ಕೆಳಕಂಡಂತಿದೆ.

| Sl No | | Subject | No. of allotted candidates |
|---|---|---|---|
| 1 | | MBBS | 3221 |
| 2 | | MD/MS/Diploma | 1182 |
| 3 | | Super Specialty | 9 |
| | | Total | 4412 |

| | | |
|---|---|---|
| | | 5. ಇದಲ್ಲದೇ ರಾಷ್ಟ್ರೀಯ ಆರೋಗ್ಯ ಅಭಿಯಾನದ ಅಡಿಯಲ್ಲಿ ಸಹ ವೈದ್ಯರು-ಇತರೆ ಸಿಬ್ಬಂದಿಗಳನ್ನು ಗುತ್ತಿಗೆ/ಹೊರಗುತ್ತಿಗೆಆಧಾರದ ಮೇಲೆ ನೇಮಿಸಲು ಕ್ರಮಕೈಗೊಳ್ಳಲಾಗುತ್ತಿದೆ. |

**ಆಕುಕ 23 ಹೆಚ್ ಎಸ್ ಡಿ 2023.**

( **ದಿನೇಶ್ ಗುಂಡೂರಾವ್**)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.